# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.06.2024 / 14.30 hrs**

ಮುಖ್ಯಾಂಶಗಳು

**೧. ಪೋಕ್ಸೊ ಪ್ರಕರಣ- ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ತನಿಖಾ ತಂಡದ ಎದುರು ಹಾಜರಾಗಬೇಕು - ಗೃಹ ಸಚಿವ ಡಾ.ಜಿ.ಪರಮೇಶ್ವರ್**

**೨. ಚಿನ್ನೇನಹಳ್ಳಿ ಕಲುಷಿತ ನೀರು ಪ್ರಕರಣ - ಗ್ರಾಮದಲ್ಲೇ ತುರ್ತು ಚಿಕಿತ್ಸಾ ಕೇಂದ್ರ ಕಾರ್ಯಾರಂಭ**

**೩. ಹೋಟೆಲ್, ರೆಸ್ಟೋರೆಂಟ್ ಮತ್ತು ಲಘು ಉಪಹಾರ ಕೇಂದ್ರಗಳಲ್ಲಿ ಸ್ವಚ್ಛತೆ ಪಾಲನೆ ಖಾತರಿ ಕ್ರಮಕ್ಕೆ ಸರ್ಕಾರದ ಸೂಚನೆ**

**೪. ಈ ತಿಂಗಳ ೨೪ ರಿಂದ ೧೮ನೇ ಲೋಕಸಭೆಯ ಚೊಚ್ಚಲ ಅಧಿವೇಶನ; ೨೬ರಂದು ನೂತನ ಲೋಕಸಭಾಧ್ಯಕ್ಷರ ಚುನಾವಣೆ**

**<><*<><>*><>**

ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ಬಂಧನ ವಾರಂಟ್ ಹೊರಡಿಸಲಾಗಿದ್ದು, ಅವರು ಶೀಘ್ರದಲ್ಲೇ ತಾವಾಗೇ ತನಿಖಾ ತಂಡದ ಮುಂದೆ ಹಾಜರಾದರೆ ಒಳ್ಳೆಯದು ಎಂದು ಗೃಹ ಸಚಿವ ಜಿ ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜುಲೈ ೧೭ರಂದು ತನಿಖಾಧಿಕಾರಿಗಳ ಮುಂದೆ ಹಾಜರಾಗುವುದಾಗಿ ಯಡಿಯೂರಪ್ಪ ಹೇಳಿದ್ದಾರೆ. ಅವರ ವಿರುದ್ಧ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಪ್ರಕರಣ ಸಂಬಂಧ ಧ್ವನಿ ಮಾದರಿಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದು, ವರದಿಗಾಗಿ ಕಾಯಲಾಗುತ್ತಿದೆ. ಆರೋಪಿ ಪ್ರಮುಖ ವ್ಯಕ್ತಿ ಮತ್ತು ಗಣ್ಯ ವ್ಯಕ್ತಿ ಆಗಿರುವುದರಿಂದ ಕ್ರಮ ಕೈಗೊಳ್ಳುವ ಮುನ್ನ ಎಲ್ಲವನ್ನೂ ಪರಿಶೀಲಿಸಬೇಕಾಗುತ್ತದೆ ಎಂದರು. ಯಡಿಯೂರಪ್ಪ ಜಾಮೀನು ಕೋರಿಕೆ ಅರ್ಜಿಯ ವಿಚಾರಣೆಯನ್ನು ರಾಜ್ಯ ಹೈಕೋರ್ಟ್ ಇಂದು ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ. ಪ್ರಕರಣದ ರದ್ದತಿಗೆ ತಡೆಯಾಜ್ಞೆ ನೀಡುವಂತೆ ಬಿಎಸ್ ಯಡಿಯೂರಪ್ಪ ಅವರು ಸಲ್ಲಿಸಿರುವ ಅರ್ಜಿಯನ್ನೂ ನ್ಯಾಯಾಲಯ ಪರಿಶೀಲಿಸಲಿದೆ ಎಂದು ಗೃಹ ಸಚಿವರು ತಿಳಿಸಿದರು.

**<><*<><>*><>**

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಲೈಂಗಿಕ ದೌರ್ಜನ್ಯ ದೂರು ಸಂಬಂಧ ರಾಜ್ಯ ಸರ್ಕಾರದ ನಡವಳಿಕೆ ಸಂದೇಹಾಸ್ಪದವಾಗಿದೆ ಎಂದು ಬಿಜೆಪಿ ನಾಯಕ ಸಿ.ಟಿ.ರವಿ ಪ್ರತಿಕ್ರಿಯಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಪಕ್ಷದ ರಾಜ್ಯ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣ ಸಂಬಂಧ ವಿಳಂಬ ಧೋರಣೆ ಅನುಸರಿಸಿದ ಸರ್ಕಾರ ಈಗ ಇದ್ದಕ್ಕಿದ್ದಂತೆ ಚುರುಕಾಗಿರುವುದು ಅನುಮಾನಗಳನ್ನು ಹುಟ್ಟಿಸಿದೆ. ಸರ್ಕಾರದ ನಡೆಗೆ ಲೋಕಸಭಾ ಚುನಾವಣೆಯಲ್ಲಿನ ವೈಫಲ್ಯದ ಹತಾಶೆ ಕಾರಣವಾಗಿರಬಹುದು ಎಂದರು. ದೂರುದಾರರ ಮಾನಸಿಕ ಸ್ಥಿತಿಯ ಬಗ್ಗೆ ಸಂದೇಹ ವ್ಯಕ್ತಪಡಿಸಿದ್ದ ಗೃಹ ಸಚಿವರ ಅಂದಿನ ಹೇಳಿಕೆಗೂ ಈಗ ಅವರು ಮಾತನಾಡುತ್ತಿರುವುದಕ್ಕೂ ಸಂಬಂಧವೇ ಇಲ್ಲ. ಪ್ರಕರಣದ ಬಗ್ಗೆ ರಾಜ್ಯ ಹೈಕೋರ್ಟ್ ಇಂದು ಪರಿಶೀಲಿಸಲಿದೆ. ನ್ಯಾಯಾಲಯದ ತೀರ್ಮಾನವನ್ನು ಬಿಜೆಪಿ ಗೌರವಿಸಲಿದೆ ಎಂದು ಸಿ.ಟಿ.ರವಿ ಹೇಳಿದರು.

**<><*<><>*><>**

ತುಮಕೂರು ಮಧುಗಿರಿ ತಾಲೂಕು ಚಿನ್ನೇನಹಳ್ಳಿ ಗ್ರಾಮದಲ್ಲಿ ಕಲುಷಿತ ನೀರು ಸೇವನೆಯಿಂದ ೯೮ ಮಂದಿ ಅಸ್ವಸ್ಥರಾಗಿದ್ದು, ಈ ಪೈಕಿ ೩೯ ಜನರಿಗೆ ತಾಲೂಕು ಮತ್ತು ಜಿಲ್ಲಾಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗ್ರಾಮಸ್ಥರ ಆರೋಗ್ಯ ಪರಿಸ್ಥಿತಿಯ ಬಗ್ಗೆ ನಿಗಾ ಇಡಬೇಕು ಹಾಗೂ ಪರ್ಯಾಯ ಶುದ್ಧ ಕುಡಿಯುವ ನೀರು ಪೂರೈಕೆಗೆ ವ್ಯವಸ್ಥೆ ಕಲ್ಪಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವ ಪ್ರಿಯಾಂಕ ಖರ್ಗೆ ಸೂಚಿಸಿದ್ದಾರೆ. ಚಿನ್ನೇನಹಳ್ಳಿಯಲ್ಲಿ ತುರ್ತು ಚಿಕಿತ್ಸಾ ಕೇಂದ್ರವನ್ನು ಆರಂಭಿಸಲಾಗಿದ್ದು, ಗ್ರಾಮದ ಶಾಲೆಯಲ್ಲಿ ಆರು ಹಾಸಿಗೆಗಳ ತುರ್ತು ಚಿಕಿತ್ಸಾ ಕೇಂದ್ರ ಕಾರ್ಯಾರಂಭಮಾಡಿದೆ. ವೈದ್ಯಕೀಯ ಸಿಬ್ಬಂದಿ ಸ್ಥಳದಲ್ಲೇ ಮೊಕ್ಕಾಮ್ ಹೂಡಿದ್ದಾರೆ. ಪ್ರಕರಣ ಸಂಬಂಧ ಬೇಜವಾಬ್ದಾರಿಯಿಂದ ನಡೆದುಕೊಂಡ ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ.

**<><*<><>*><>**

ಕೋಲಾರ ಜಿಲ್ಲೆಯ ಎಲ್ಲಾ ತಾಲೂಕುಗಳ ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ಇಂದಿನಿಂದ ಈ ತಿಂಗಳ ೨೨ನೇ ತಾರೀಕಿನವರೆಗೆ ಜಿಲ್ಲೆಯ ೧೭ ಪರೀಕ್ಷಾ ಕೇಂದ್ರಗಳಲ್ಲಿ ಬೆಳಗ್ಗೆ ೮ ರಿಂದ ಮಧ್ಯಾಹ್ನ ೨ ಗಂಟೆವರೆಗೆ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ೨೦೦ ಮೀಟರ್ ವ್ಯಾಪ್ತಿ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಈ ಪ್ರದೇಶದಲ್ಲಿ ೫ಕ್ಕಿಂತ ಹೆಚ್ಚು ಮಂದಿ ಗುಂಪು ಸೇರುವುದು ಅಹಿತಕರ ಘಟನೆಗಳಿಗೆ ಪ್ರಚೋದನೆ ನೀಡುವುದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಟ್ಯೂಷನ್, ಟ್ಯುಟೋರಿಯಲ್ಸ್, ಜೆರಾಕ್ಸ್ ಮತ್ತು ಕಂಪ್ಯೂಟರ್ ಅಂಗಡಿಗಳು ತೆರೆಯುವುದನ್ನು ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ದಕ್ಷಿಣ ಕುವೈತ್‌ನ ಮಂಗಫ್ ವಸತಿ ಪ್ರದೇಶದಲ್ಲಿ ಸಂಭವಿಸಿದ ಬೆಂಕಿ ದುರಂತದಲ್ಲಿ ಸಾವಿಗೀಡಾದ ೪೦ ಭಾರತೀಯರ ಪೈಕಿ ಕಲಬುರಗಿ ಜಿಲ್ಲೆ ಆಳಂದ ತಾಲೂಕು ಸರಸಂದ ಗ್ರಾಮದ ವಿಜಯಕುಮಾರ್ ಸೇರಿದ್ದು, ಅವರ ಪಾರ್ಥಿವ ಶರೀರವನ್ನು ಸ್ವಗ್ರಾಮಕ್ಕೆ ತರಲು ಅಗತ್ಯ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕುವೈತ್ ಬೆಂಕಿ ಅನಾಹುತದಲ್ಲಿ ಮೃತಪಟ್ಟ ಭಾರತೀಯರಿಗೆ ಸಚಿವರು ಶ್ರದ್ಧಾಂಜಲಿ ಸಲ್ಲಿಸಿದ್ದು, ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

<><*<><>*><>

ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್ ಹಾಗೂ ಲಘು ಉಪಹಾರ ಕೇಂದ್ರಗಳಲ್ಲಿ ಸ್ವಚ್ಛತೆ ಪಾಲಿಸದ ಬಗ್ಗೆ ಮುಖ್ಯಮಂತ್ರಿ ಕಚೇರಿಯ ಸಾರ್ವಜನಿಕ ಕುಂದು-ಕೊರತೆ ವಿಭಾಗದ ವಿಶೇಷ ಕರ್ತವ್ಯಾಧಿಕಾರಿ ತುರ್ತು ಕ್ರಮ ಕೈಗೊಂಡಿದ್ದಾರೆ. ಹೋಟೆಲ್ ಮತ್ತು ಉಪಹಾರ ಕೇಂದ್ರಗಳಲ್ಲಿ ಕಲುಷಿತ, ವಿಷಾಹಾರ ಪೂರೈಕೆ, ಕಲಬೆರಕೆ ಪದಾರ್ಥಗಳ ಬಳಕೆ ಹಾಗೂ ಅವಧಿ ಮೀರಿದ ಪದಾರ್ಥಗಳನ್ನು ಬಳಸುತ್ತಿರುವುದರಿಂದ ಹಲವು ಸಮಸ್ಯೆಗಳು ಎದುರಾಗುತ್ತಿವೆ. ಸಾರ್ವಜನಿಕರ ಆರೋಗ್ಯ ರಕ್ಷಣೆ ಹಿತದೃಷ್ಟಿಯಿಂದ ಉತ್ತಮ ಗುಣಮಟ್ಟ ಹಾಗೂ ಸ್ವಚ್ಛತೆ ಪಾಲನೆ ಅತ್ಯಗತ್ಯವಾಗಿದೆ ಎಂದು ತಿಳಿಸಲಾಗಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಮಾನದಂಡಗಳ ಕಾಯ್ದೆ ೨೦೦೬ ಮತ್ತು ೨೦೧೧ ನಿಯಮಗಳಲ್ಲಿ ಸೂಚಿಸಿರುವ ಮಾರ್ಗಸೂಚಿಯಂತೆ ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್ ಹಾಗೂ ಲಘು ಉಪಹಾರ ಕೇಂದ್ರಗಳಲ್ಲಿ ಸೂಕ್ತ ತಪಾಸಣೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ.

<><*<><>*><>

೧೮ನೇ ಲೋಕಸಭೆಯ ಚೊಚ್ಚಲ ಅಧಿವೇಶನ ಈ ತಿಂಗಳ ೨೪ ರಿಂದ ಆರಂಭವಾಗಲಿದೆ. ೨೬ರಂದು ಲೋಕಸಭಾಧ್ಯಕ್ಷರ ಚುನಾವಣೆ ನಿಗದಿಯಾಗಿದೆ. ಉಳಿದಂತೆ ಈ ಅಧಿವೇಶನದಲ್ಲಿ ಇತ್ತೀಚೆಗೆ ಮುಕ್ತಾಯಗೊಂಡ ಮಹಾ ಚುನಾವಣೆಯಲ್ಲಿ ಆಯ್ಕೆಯಾಗಿರುವ ನೂತನ ಸಂಸದರು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಷಣ ಮಾಡಲಿದ್ದಾರೆ. ರಾಜ್ಯಸಭೆಯ ಕಲಾಪಗಳು ಈ ತಿಂಗಳ ೨೭ ರಿಂದ ಆರಂಭವಾಗಲಿವೆ. ಉಭಯ ಸದನಗಳ ಕಲಾಪಗಳು ಜುಲೈ ೩ರಂದು ಮುಕ್ತಾಯವಾಗುತ್ತದೆ.

<><*<><>*><>

ಗದಗ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಮನ್ರೇಗಾ ಕಾಮಗಾರಿ ಕೈಗೊಳ್ಳಲು ವಿಪುಲ ಅವಕಾಶಗಳಿದ್ದು, ತೋಟಗಾರಿಕೆ ಬೆಳೆಗಾರರನ್ನು ಸ್ವಾವಲಂಬಿಗಳನ್ನಾಗಿಸುವಲ್ಲಿ ಅಧಿಕಾರಿಗಳು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್. ಸೂಚಿಸಿದ್ದಾರೆ. ಗದಗ್‌ನಲ್ಲಿಂದು ನಡೆದ ಕೇಂದ್ರ ಪುರಸ್ಕೃತ ಯೋಜನೆಗಳ ವಿವಿಧ ಇಲಾಖೆಗಳ ಪ್ರಗತಿ ಪರಿಶಿಲನಾ ಸಭೆಯಲ್ಲಿ ಅವರು ಮಾತನಾಡಿದರು. ಕೃಷಿ, ರೇಷ್ಮೆ, ಮೀನುಗಾರಿಕೆ, ಪಶುಸಂಗೋಪನೆ ಇಲಾಖೆಗಳ ಅಧಿಕಾರಿಗಳು ಕೇಂದ್ರ ಪುರಸ್ಕೃತ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಿಲ್ಲದೆ, ಕಾರ್ಯ ನಿರ್ವಹಿಸಬೇಕು, ಜಿಲ್ಲೆಯ ರೈತರಿಗೆ ಮುಂಗಾರು ಹಂಗಾಮಿನ ಬಿತ್ತನೆಗೆ ಅಗತ್ಯವಿರುವ ರಸಗೊಬ್ಬರ ಮತ್ತು ಬೀಜಗಳನ್ನು ಸಕಾಲಿಕವಾಗಿ ಪೂರೈಕೆ ಮಾಡಬೇಕು ಎಂದು ಅವರು ಸೂಚಿಸಿದರು.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಮಳೆಗಾಲ ಆರಂಭದ ಹಿನ್ನೆಲೆಯಲ್ಲಿ ಸಾರ್ವಜನಿಕರು ಆರೋಗ್ಯ ರಕ್ಷಣೆಯ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಪ್ರಭುಲಿಂಗ ಮಾನಕರ್ ಸಲಹೆ ನೀಡಿದ್ದಾರೆ. ಕುಡಿಯುವ ನೀರನ್ನು ಕುದಿಸಿ, ಆರಿಸಿ ಕುಡಿಯಬೇಕು. ಆಹಾರ ಪದಾರ್ಥಗಳನ್ನು ನೊಣಗಳಿಂದ ರಕ್ಷಿಸಬೇಕು. ಬಿಸಿ ಮತ್ತು ತಾಜಾ ಆಹಾರ ಸೇವನೆ ಸೂಕ್ತ. ಮನೆಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ನೀರು ಸಂಗ್ರಹಿಸುವ ವಸ್ತುಗಳ ಸ್ವಚ್ಛತೆ ಅಗತ್ಯ. ಈ ಮೂಲಕ ಮಳೆಗಾಲದಲ್ಲಿ ಕಾಣಿಸಿಕೊಳ್ಳುವ ವಾಂತಿ-ಬೇಧಿ ಪ್ರಕರಣಗಳಿಂದ ರಕ್ಷಿಸಿಕೊಳ್ಳಬಹುದು ಎಂದು ಅವರು ಸೂಚಿಸಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಕೃಷಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಕೃತಿ ವಿಕೋಪದಿಂದ ಬೆಳೆ ನಷ್ಟವಾಗಿರುವ ರೈತರಿಗೆ ಪರಿಹಾರ ನೀಡುವ ಮೂಲಕ ಆರ್ಥಿಕ ಭದ್ರತೆ ಒದಗಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಲಲಿತಾ ರೆಡ್ಡಿ ತಿಳಿಸಿದ್ದಾರೆ. ಪ್ರಮುಖ ಬೆಳೆಗಳಿಗೆ ಆಯಾ ತಾಲೂಕಿನಲ್ಲಿ ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳನ್ನು ವಿಮಾ ಘಟಕವಾಗಿ ಪರಿಗಣಿಸಲಾಗಿದೆ. ಇತರ ಬೆಳೆಗಳಿಗೆ ಹೋಬಳಿ ಮಟ್ಟದಲ್ಲಿ ವಿಮಾ ಘಟಕ ತೆರೆಯಲಾಗಿದೆ. ರೈತರು ತಮ್ಮ ಸಮೀಪದ ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರ, ಕರ್ನಾಟಕ ಒನ್ ಅಥವಾ ಬ್ಯಾಂಕ್‌ಗಳಲ್ಲಿ ವಿಮಾ ಪ್ರಸ್ತಾವನೆ, ಪಹಣಿ, ಚಾಲ್ತಿ ಬ್ಯಾಂಕ್ ಪಾಸ್ ಪುಸ್ತಕ, ಮೊಬೈಲ್ ಸಂಖ್ಯೆ ಮತ್ತು ಆಧಾರ್ ಸಂಖ್ಯೆಯೊಂದಿಗೆ ಪ್ರೀಮಿಯಂ ಪಾವತಿಸಿ, ವಿಮೆಗೆ ನೋಂದಾಯಿಸಬೇಕೆಂದು ಅವರು ಮಾಹಿತಿ ನೀಡಿದ್ದಾರೆ.

**<><*<><>*><>**

೧. ಹಾಸನ ಜಿಲ್ಲೆಯಲ್ಲಿ ಇತ್ತೀಚೆಗೆ ಕಾಡಾನೆ ದಾಳಿಯಿಂದ ಗಾಯಗೊಂಡಿರುವ ಕೂಲಿಕಾರ್ಮಿಕರೊಬ್ಬರಿಗೆ ಹಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುತ್ತದೆ ಎಂದು ಶಾಸಕ ಸಿಮೆಂಟ್ ಮಂಜುನಾಥ್ ತಿಳಿಸಿದ್ದಾರೆ.

೨. ರಕ್ತದಾನಿಗಳ ದಿನದ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಇಂದು ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ನಂದಿ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು, ವೈದ್ಯರು, ಸಿಬ್ಬಂದಿ, ಪ್ಯಾರಾ ಮೆಡಿಕಲ್ ಮತ್ತು ನರ್ಸಿಂಗ್ ವಿದ್ಯಾರ್ಥಿಗಳು ರಕ್ತದಾನ ಮಾಡುವ ಮೂಲಕ ಈ ದಿನಾಚರಣೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರು.

**<><*<><>*><>**

ದಾವಣಗೆರೆ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಮಿಷನ್ ಶಕ್ತಿ ಯೋಜನೆಯ ಮಾರ್ಗಸೂಚಿ ಅನ್ವಯ ಸ್ವಾಧಾರಗೃಹ ಹಾಗೂ ಉಜ್ವಲ ಕೇಂದ್ರಗಳನ್ನು ವಿಲೀನಗೊಳಿಸಿ ಶಕ್ತಿಸದನ ಕೇಂದ್ರಗಳನ್ನಾಗಿ ಸರ್ಕಾರದಿಂದ ಅನುಷ್ಠಾನಗೊಳಿಸುವ ಸಂಬಂಧ ಜಿಲ್ಲಾ ಮಟ್ಟದ ಸಮಿತಿಯ ಸಭೆ ಇಂದು ನಡೆಯಿತು. ಪ್ರಸ್ತುತ ದಾವಣಗೆರೆಯಲ್ಲಿ ಎರಡು ಸ್ವಾಧಾರಗೃಹ ಹಾಗೂ ಒಂದು ರಾಜ್ಯ ಮಹಿಳಾ ನಿಲಯ ಕಾರ್ಯ ನಿರ್ವಹಿಸುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ದೌರ್ಜನ್ಯಕ್ಕೊಳಗಾದ ಮಹಿಳೆಯರು ಹಾಗೂ ಮಾನವ ಕಳ್ಳಸಾಗಾಣಿಕೆ ಪ್ರಕರಣಗಳಲ್ಲಿ ರಕ್ಷಿಸಲ್ಪಟ್ಟ ಮಹಿಳೆಯರಿಗೆ ಸೂಕ್ತ ಕಾನೂನು ಮತ್ತು ವೈದ್ಯಕೀಯ ನೆರವಿನೊಂದಿಗೆ ವೃತ್ತಿ ತರಬೇತಿ ಮೂಲಕ ಪುನರ್ ವಸತಿಗೊಳಿಸಬೇಕಾದ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ತಿಳಿಸಿದರು. ಸಂತ್ರಸ್ತ ಮಹಿಳೆಯರಿಗೆ ಸಾಂತ್ವನ ನೀಡಲು ಸಮಾಲೋಚಕರ ನೆರವು ಪಡೆಯಲಾಗುವುದು ಎಂದು ಅವರು ಹೇಳಿದರು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

**<><*<><>*><>**

ಈ ತಿಂಗಳ ೨೧ರಂದು ಅಂತಾರಾಷ್ಟ್ರೀಯ ಯೋಗ ದಿನದ ೧೧ನೆಯ ದಿನಾಚರಣೆ ನಡೆಯಲಿರುವ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ತಮ್ಮ ಎಕ್ಸ್ ಸಾಮಾಜಿಕ ಜಾಲತಾಣ ವೇದಿಕೆಯಲ್ಲಿ ತ್ರಿಕೋನಾಸನದ ವಿಡಿಯೋ ಚಿತ್ರವನ್ನು ಹಂಚಿಕೊಂಡಿದ್ದಾರೆ. ತ್ರಿಕೋನಾಸನ ಅಭ್ಯಾಸದಿಂದ ದೊರೆಯುವ ಪ್ರಯೋಜನಗಳನ್ನು ಚಿತ್ರ ಸಹಿತ ವಿವರಿಸಿದ್ದಾರೆ. ಭುಜಗಳು, ಬೆನ್ನು ಮತ್ತು ಏಕಾಗ್ರತೆಯ ಸುಧಾರಣೆಗಾಗಿ ತ್ರಿಕೋನಾಸನ ಅಭ್ಯಾಸ ಪ್ರಯೋಜನಕಾರಿ ಎಂದು ಪ್ರಧಾನಮಂತ್ರಿ ಸಲಹೆ ಮಾಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ <>*><>**